# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ದಾವಣಗೆರೆ ಜಿಲ್ಲೆ, ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 19 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ತುಂಬಿಸುವ ಬೆನಕನಹಳ್ಳಿ ಏತ ನೀರಾವರಿ ಯೋಜನೆಯ ರೂ.48.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ತಾಂತ್ರಿಕ/ಬೆನಕನಹಳ್ಳಿ ಏನೀಯೋ/2019-20 /3718 ದಿನಾಂಕ:10.10.2019 ಮತ್ತು ಪತ್ರ ಸಂಖ್ಯೆ: 3343 ದಿನಾಂಕ: 14.10.2020.

****

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕಿನ 19 ಕೆರೆಗಳಿಗೆ ಒಳ ಹರಿವಿನ ಅಭಾವದಿಂದ ನೀರಿನ ಸಂಗ್ರಹಣೆಯಾಗದೇ ಇರುವುದರಿಂದ, ಸ್ಥಳೀಯ ರೈತರು ಹಾಗೂ ಜನ-ಪ್ರತಿನಿಧಿಗಳು ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿ ಪಡಿಸುವಂತೆ ಒತ್ತಾಯಿಸಿರುತ್ತಾರೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಮೇಲೆ ಓದಲಾದ ಪತ್ರಗಳಲ್ಲಿ ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ.50 ರಷ್ಟು ತುಂಬಿಸಿ ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟವನ್ನು ವೃದ್ಧಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸುತ್ತ, ದಾವಣಗೆರೆ ಜಿಲ್ಲೆ, ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 19 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ಎತ್ತಿ ತುಂಬಿಸುವ ಬೆನಕನಹಳ್ಳಿ ಏತ ನೀರಾವರಿ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.48.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯ ರೂ.55.00 ಕೋಟಿಗಳ ವಿವರವಾದ ಯೋಜನಾ ವರದಿಯನ್ನು ದಿನಾಂಕ:19.02.2019 ರಂದು ಜರುಗಿದ ಅಂದಾಜು ಪರಿಶೀಲನಾ ಸಮಿತಿಯ 51ನೇ ಸಭೆಯಲ್ಲಿ ಮಂಡಿಸಲಾಗಿರುತ್ತದೆ. ಸಮಿತಿಯ ಸಲಹೆಯಂತೆ, ಸದರಿ ಯೋಜನೆಯ ರೂ.48.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:20.09.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 90ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿ, ಇದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ದಾವಣಗೆರೆ ಜಿಲ್ಲೆ, ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 19 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ಎತ್ತಿ ತುಂಬಿಸುವ, 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ, ಬೆನಕನಹಳ್ಳಿ ಏತ ನೀರಾವರಿ ಯೋಜನೆಯ ರೂ.48.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತರವರು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 102 ಎಂಎಂಬಿ 2020, ಬೆಂಗಳೂರು,**
**ದಿನಾಂಕ: 02.02.2021**

ದಾವಣಗೆರೆ ಜಿಲ್ಲೆಯ ಹೊನ್ನಾಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 19 ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ಎತ್ತಿ ತುಂಬಿಸುವ, 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ಬೆನಕನಹಳ್ಳಿ ಏತ ನೀರಾವರಿ ಯೋಜನೆಯ ರೂ.48.00ಕೋಟಿಗಳ (ನಲವತ್ತೆಂಟು ಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 203 ಆಕೋ-1/2020 (ಇ-ಆಫೀಸ್) ದಿನಾಂಕ:30.12.2020 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 04 ಎಂಸಿಎಂ 2021-ಪಿಪಿಡಿ ದಿನಾಂಕ:15.01.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಶ್ರೀಹರಿ ಎಸ್.ಆರ್.)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ. (ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ-26/2021 ದಿನಾಂಕ:21.01.2021ರ ಮೇರೆಗೆ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
13. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
14. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ. ಇಲಾಖೆ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.